# ಕರ್ನಾಟಕ ಸರ್ಕಾರ

ಸಂಖ್ಯೆ ಸಿಆಸುಇ 9 ಸೇಇವಿ 95

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ : 26-6-96.

## ಸುತ್ತೋಲೆ

ವಿಷಯ : ಕ್ರಿಮಿನಲ್ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಟ್ಟ ಅಪರಾಧಕ್ಕಾಗಿ ದಂಡನೆಗೆ ಗುರಿಯಾದ ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಬಗ್ಗೆ ಮಾರ್ಗಸೂಚಿ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ 14(1)ರನುಸಾರ, ಸದರಿ ನಿಯಮಗಳ ನಿಯಮಗಳು 11,12 ಮತ್ತು 13ರಲ್ಲಿ ಏನೇ ಹೇಳಲಾಗಿದ್ದರೂ ಕ್ರಿಮಿನಲ್ ನ್ಯಾಯಾಲಯದಲ್ಲಿ ಕ್ರಿಮಿನಲ್ ಆರೋಪಕ್ಕಾಗಿ ದೋಷಸಿದ್ಧಿಯಾದ ಸರ್ಕಾರಿ ನೌಕರರನ್ನು ಪುನಃ ಇಲಾಖಾ ವಿಚಾರಣೆಗೆ ಒಳಪಡಿಸದೆಯೇ ಸೇವೆಯಿಂದ ವಜಾ ಮಾಡುವ ಅಥವಾ ತೆಗೆದು ಹಾಕುವ ಅಥವಾ ಕೆಳದರ್ಜೆಗೆ ಇಳಿಸುವ ದಂಡನೆಯನ್ನು ವಿಧಿಸಬಹುದಾಗಿದೆ. ಈ ನಿಯಮದ ಅವಕಾಶವು, ಸಂವಿಧಾನದ ಅನುಚ್ಛೇಧ 311 (2)ರ ಬೆಂಬಲ ಪಡೆದಿದೆ.

2. ಒಂದು ವೇಳೆ, ಕ್ರಿಮಿನಲ್ ನ್ಯಾಯಾಲಯದಲ್ಲಿ ದಂಡನೆಗೊಳಗಾದ ಸರ್ಕಾರಿ ನೌಕರನು ಆ ನ್ಯಾಯಾಲಯವು ತನಗೆ ವಿಧಿಸಿದ ದಂಡನೆಯ ವಿರುದ್ಧ ಸಮರ್ಥ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿ, ಕೆಳಗಿನ ನ್ಯಾಯಾಲಯದ ದಂಡನಾ ಆದೇಶಕ್ಕೆ ತಡೆಯಾಜ್ಞೆ ಪಡೆದುಕೊಂಡಾಗಲಾಗಲೀ ಅಥವಾ ವೈಯಕ್ತಿಕ ಜಾಮೀನಿನ ಮೇಲೆ ಬಿಡುಗಡೆ ಆದೇಶ ಪಡೆದುಕೊಂಡಾಗಲಾಗಲೀ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ 14 (i)ರ ಅವಕಾಶಗಳನ್ನು ಜಾರಿಗೊಳಿಸಬಹುದಾದ ಸಾಧ್ಯತೆಯನ್ನು ಸರ್ವೋಚ್ಛ ನ್ಯಾಯಾಲಯವು ಕಾಲೇಜು ಶಿಕ್ಷಣ ಉಪನಿರ್ದೇಶಕರು (ಆಡಳಿತ) ಮದ್ರಾಸ್ ವಿರುದ್ಧ ಎಸ್. ನಗೂರ ಮೀರ ಪ್ರಕರಣದಲ್ಲಿ (ಎಐಆರ್ 1995 ಎಸ್‌ಸಿ 1364) ನೀಡಿರುವ ತೀರ್ಪಿನ ಬೆಳಕಿನಲ್ಲಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಮಾರ್ಗಸೂಚಿಯನ್ನು ನೀಡಿದೆ.

3. ಸಂವಿಧಾನದ ಅನುಚ್ಛೇದ 311(2)ರಡಿಯಲ್ಲಿನ ಎರಡನೇ ಪರಂತುಕದ ಖಂಡ (Clause) (ಎ)ಯು "ಕ್ರಿಮಿನಲ್ ಆರೋಪದ ಮೇಲೆ ದೋಷಸಿದ್ಧಿಯಾಗುವಂತೆ ಮಾಡಿದ ನಡತೆಯ ಬಗ್ಗೆ ಹೇಳುತ್ತದೆಯಾದ್ದರಿಂದ ದೋಷಸಿದ್ಧಿಯಾಗಿರುವುದನ್ನು ನಿಲಂಬನದಲ್ಲಿಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಆದ್ದರಿಂದ, ಆಪಾದಿತ ಸರ್ಕಾರಿ ನೌಕರನು ಕ್ರಿಮಿನಲ್ ನ್ಯಾಯಾಲಯದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಿದ್ದಾನೆ ಅಥವಾ ಇತರ ವ್ಯವಹರಣೆ ಹೂಡಿದ್ದಾನೆ; ಅಥವಾ ಮೇಲಿನ ನ್ಯಾಯಾಲಯವು ಕ್ರಿಮಿನಲ್ ನ್ಯಾಯಾಲಯದ ದಂಡನೆ ಆದೇಶವನ್ನು ನಿಲಂಬನೆಯಲ್ಲಿಟ್ಟಿದೆ, ಅಥವಾ ಆತನ ಮೇಲ್ಮನವಿ ಇತ್ಯರ್ಥದಲ್ಲಿರುವಾಗ ಜಾಮೀನಿನ ಮೇಲೆ ಬಿಡುಗಡೆ ಪಡೆದಿದ್ದಾನೆ" ಎಂಬ ಕಾರಣಕ್ಕಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕಣ, ನಿಯಂತ್ರಣ ಮತ್ತು ಅಪೀಲು) ನಿಯಮ 1957ರ ನಿಯಮ 14(1)ರನುಸಾರ ಕ್ರಮ ಜರುಗಿಸುವುದನ್ನು ತಡೆ ಹಿಡಿಯಬೇಕಾದ ಅಗತ್ಯವಿಲ್ಲ. ಇಂತಹ ಎಲ್ಲಾ ಸಂದರ್ಭಗಳಲ್ಲಿ ಸೂಕ್ತವಾದ ಕ್ರಮ ಎಂದರೆ, ಒಮ್ಮೆ ಒಬ್ಬ ಸರ್ಕಾರಿ ನೌಕರನು ಕ್ರಿಮಿನಲ್ ನ್ಯಾಯಾಲಯದ ದಂಡನೆಗೆ ಗುರಿಯಾದರೆ, ಆತನು ಸಲ್ಲಿಸಿರಬಹುದಾದ ಮೇಲ್ಮನವಿ ಇತ್ಯರ್ಥವಾಗುವವರೆಗೂ ಕಾಯದೆ ಸಂವಿಧಾನದ ಅನುಚ್ಛೇದ 311(2)ರಡಿಯಲ್ಲಿರುವ ಎರಡನೇ ಪರಂತುಕದ ಸಮರ್ಥನೆ ಪಡೆದಿರುವ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ 14(i) ರನುಸಾರ ಶಿಸ್ತಿನ ಕ್ರಮ ಕೈಗೊಳ್ಳತಕ್ಕದ್ದು. ಇಲ್ಲವಾದಲ್ಲಿ, ಕ್ರಿಮಿನಲ್ ನ್ಯಾಯಾಲಯದಲ್ಲಿ ತೀವ್ರ ಆರೋಪಕ್ಕಾಗಿ ದೋಷಸಿದ್ಧಿಯಾಗಿ ದಂಡನೆಗೆ ಗುರಿಯಾದಂತಹ ವ್ಯಕ್ತಿಯು ಸೇವೆಯಲ್ಲಿ ಮುಂದುವರಿಯಲು ಅವಕಾಶ ಕಲ್ಪಿಸಿದಂತಾಗುತ್ತದೆ. ಅದ್ದರಿಂದ, ಮೇಲ್ಮನವಿ ಅದೇಶವು ಇತ್ಯರ್ಥವಾಗುವುದನ್ನು ಕಾಯುವುದು ಸೂಕ್ತವಲ್ಲ. ಅದರೆ, ಒಂದು ವೇಳೆ ಆಪಾದಿತ ಸರ್ಕಾರಿ ನೌಕರನು ಮೇಲಿನ ನ್ಯಾಯಾಲಯದಲ್ಲಿ ಖುಲಾಸ (acquit) ಯಾದರೆ, ಶಿಸ್ತು ಪ್ರಾಧಿಕಾರಿಯು ಆದೇಶವನ್ನು ಪರಿಷ್ಕರಿಸಬಹುದು. ಒಂದು ವೇಳೆ ಸರ್ಕಾರಿ ನೌಕರರನ್ನು ಪುನಃ ಸೇವೆಗೆ ತೆಗೆದುಕೊಂಡಲ್ಲಿ, ಆತನು ಸೇವೆಯಲ್ಲಿ ಮುಂದುವರಿದಿದ್ದರೆ ಅರ್ಹನಾಗುತ್ತಿದ್ದಂಥ ಎಲ್ಲ ಸೌಲಭ್ಯಗಳಿಗೂ ಹಕ್ಕುಳ್ಳವನಾಗುತ್ತಾನೆ.

4. ಆದ್ದರಿಂದ, ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು, ತಮ್ಮ ಅಧೀನದಲ್ಲಿ ಬರುವ ಎಲ್ಲಾ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಗಳ ಗಮನಕ್ಕೆ ಈ ಸೂಚನೆಗಳನ್ನು ತರಲು ಕೋರಿದೆ.

ಸಹಿ/ -
ಕೆ.ಎಲ್. ಜಯರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು)

**ಕರ್ನಾಟಕ ಸರ್ಕಾರ**

ಸಂಖ್ಯೆ : ಸಿಆಸುಇ 7 ಸೇಇವಿ 96

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ : 4-7-96.

**ಸುತ್ತೋಲೆ**

ವಿಷಯ : ಸರ್ಕಾರಿ ನೌಕರರ ಮೇಲೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸಿದ ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ಸರ್ಕಾರಿ ನೌಕರರ ನಿವೃತ್ತಿ ವಯಸ್ಸನ್ನು ನಮೂದಿಸುವ ಬಗ್ಗೆ.

ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ಪ್ರಕಾರ ಸರ್ಕಾರಿ ನೌಕರರ ಮೇಲೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಿಚಾರಣಾ ಪ್ರಾಧಿಕಾರಿಯನ್ನು ನೇಮಿಸಲು ಪ್ರಸ್ತಾವನೆಗಳನ್ನು ಕೋರಿ ಕಳುಹಿಸುತ್ತಿದ್ದು, ಶಿಸ್ತುಪ್ರಾಧಿಕಾರಗಳು ಇನ್ನು ಮುಂದೆ ಈ ರೀತಿ ಪ್ರಕರಣಗಳಲ್ಲಿ ಸರ್ಕಾರಿ ನೌಕರರ ನಿವೃತ್ತಿ ವಯಸ್ಸು ನಮೂದಿಸಬೇಕೆಂದು ಕರ್ನಾಟಕ ಲೋಕಾಯುಕ್ತ ನಿಬಂಧಕರು ಸರ್ಕಾರದ ಗಮನಕ್ಕೆ ತಂದಿದ್ದಾರೆ.

2. ಅದ್ದರಿಂದ, ಎಲ್ಲಾ ಸಕ್ಷಮ ಶಿಸ್ತು ಪ್ರಾಧಿಕಾರಗಳು ಇನ್ನು ಮುಂದೆ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಇಲಾಖಾ ವಿಚಾರಣೆ ನಡೆಸಲು ವಹಿಸುವ ಎಲ್ಲಾ ಪ್ರಕರಣಗಳಲ್ಲಿ ಸರ್ಕಾರಿ ಅಧಿಕಾರಿ:ನೌಕರರ ನಿವೃತ್ತಿ ವಯಸ್ಸನ್ನು ಕಡ್ಡಾಯವಾಗಿ ತಪ್ಪದೇ ನಮೂದಿಸಬೇಕೆಂದು ಈ ಮೂಲಕ ಕೋರಿದೆ.

ಸಹಿ/-
ಕೆ.ಎಲ್. ಜಯರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು)

**GOVERNMENT OF KARNATAKA**

No. DPAR 4 SDE 96

Karnataka Government Secretariat,
Vidhana Soudha,
Bangalore, dated : 28.8.96.

**CIRCULAR**

**Sub:** Avoiding delay in initiating department enquiries-Instructions-Regarding.

**Ref:** 1. O.M.No. DPAR 13 SDE 85, dated 3.7.85
2. O.M.No. DPAR 8 SDE 85, dated 30.12.86.
3. G.O.No. DPAR 35 SDE 86, dated 7.1.87.